ಸರ್ಕಾರಿ ಪ್ರಥಮದರ್ಜೆ ಕಾಲೇಜು, ಮಾದನಹಿಪ್ಪರಗಾ: 2007–08ನೇ ಸಾಲಿನಲ್ಲಿ ಕಾಲೇಜನ್ನು ಪ್ರಾರಂಭಿಸಲಾಗಿದ್ದು, ಪ್ರಸ್ತುತ , ಬಿ.ಎ., ಬಿ.ಬಿ.ಎಂ. ಕೋರ್ಸುಗಳನ್ನೊಳಗೊಂಡಂತೆ 73 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಸದರಿ ಕಾಲೇಜಿಗೆ ನಿವೇಶನವು ದಾನ ರೂಪದಲ್ಲಿ ದೊರೆತಿದ್ದು, ಸ್ವಂತ ಕಟ್ಟಡ ನಿರ್ಮಿಸುವ ಸಲುವಾಗಿ ರೂ.121.00 ಲಕ್ಷಗಳ ಅಂದಾಜು ಮೊತ್ತಕ್ಕೆ ನೆರೆಸಂತ್ರಸ್ಥರ ಪ್ರದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ನಬಾರ್ಡ್ ಆರ್.ಐ.ಡಿ.ಎಫ್–15 ರಡಿ ಅನುದಾನ ಒದಗಿಸುವಂತೆ ಕೋರಿ ಪ್ರಸ್ತಾವನೆಯನ್ನು ನಬಾರ್ಡ್‌ಗೆ ಸಲ್ಲಿಸಲಾಗಿರುತ್ತದೆ. ಅನುದಾನ ಮಂಜೂರಾದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಈ) **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಳಂದ:** ಕಟ್ಟಡ ಕಾಮಗಾರಿಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾದನಹಿಪ್ಪರಗಾ: ಕಟ್ಟಡ ಕಾಮಗಾರಿಗೆ ನಬಾರ್ಡ್ ಆರ್.ಐ.ಡಿ.ಎಫ್– 15 ರಡಿಯಲ್ಲಿ ಕೋರಿರುವ ಅನುದಾನ ಮಂಜೂರಾದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಉ) ಆಳಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಅನುದಾನ ಒದಗಿಸಲಾಗಿದೆ.

ಊ) **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಳಂದ:** ರೂ.75.00 ಲಕ್ಷಗಳ ಅಂದಾಜಿಗೆ 2007–08ನೇ ಸಾಲಿನಲ್ಲಿ ರೂ.22.50 ಒದಗಿಸಲಾಗಿತ್ತು. ಕಾಮಗಾರಿ ಪ್ರಗತಿಯನ್ನಾಧರಿಸಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜು ಸ್ಥಾಪನೆ

818 (780) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ॥ ನಂಜುಂಡಪ್ಪ ವರದಿಯನ್ವಯ ಅತೀ ಹಿಂದುಳಿದ ತಾಲ್ಲೂಕುಗಳಲ್ಲಿ ಒಂದಗಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಬಗ್ಗೆ ಸರ್ಕಾರ ಗಮನ ಹರಿಸುವುದೇ?

ಆ) ಈ ವರ್ಷದಲ್ಲಿನ ಅನುದಾನದಲ್ಲಿ ಸೇರಿಸಿ ಮಂಜೂರು ಮಾಡಲು ಕ್ರಮಕೈಗೊಳ್ಳಲಾಗುವುದೇ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ತುಮಕೂರಿನಲ್ಲಿ 04 ಖಾಸಗಿ ಇಂಜಿನಿಯರಿಂಗ್ ಕಾಲೇಜು ಗಳಿವೆ. 01 ಸರ್ಕಾರಿ, 01 ಖಾಸಗಿ ಹಾಗೂ 01 ಅನುದಾನಿತ ಪಾಲಿಟೆಕ್ನಿಕ್ ಇದ್ದುದರಿಂದ ಚಿಕ್ಕನಾಯಕನಹಳ್ಳಿಗೆ ಇಂಜಿನಿಯರಿಂಗ್ ಅಥವಾ ಪಾಲಿಟೆಕ್ನಿಕ್ ಪ್ರಾರಂಭಿಸುವ ಅಗತ್ಯತೆ ಕಂಡುಬಂದಿಲ್ಲ. ಈಗಾಗಲೇ ಹೊಸದಾಗಿ ಪ್ರಾರಂಭಿಸಿದ 43 ಪಾಲಿಟೆಕ್ನಿಕ್‌ಗಳಿಗೆ ಹಾಗೂ 09 ಇಂಜಿನಿಯರಿಂಗ್ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಗಮನ ನೀಡಲಾಗುತ್ತಿದೆ.

ಆ) ಇಲ್ಲ.

ಗ್ರಾಮ ಪಂಚಾಯತ್ ಸಿಬ್ಬಂದಿ

820 (165) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ಇಂದಬೆಟ್ಟು ಗ್ರಾಮ ಪಂಚಾಯತ್‌ನ ಖಾಯಂ ಕಾರ್ಯದರ್ಶಿಗಳು;

ಆ) ಈ ಕಾರ್ಯದರ್ಶಿಯವರು ಕಳೆದ ಒಂದು ದಶಕದಿಂದ ಕರ್ತವ್ಯಕ್ಕೆ ಗೈರು ಹಾಜರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ನಿರಂತರ ಗೈರು ಹಾಜರಾಗಿರುವ ಈ ಕಾರ್ಯದರ್ಶಿಯವರನ್ನು ನೆರೆಯ ತಾಲ್ಲೂಕಿನಿಂದ ಬೆಳ್ತಂಗಡಿ ತಾಲ್ಲೂಕಿನ ಇಂದಬೆಟ್ಟು ಗ್ರಾಮ ಪಂಚಾಯಿತಿಗೆ ಯಾವ ದಿನಾಂಕದಿಂದ ವರ್ಗಾವಣೆ ಮಾಡಲಾಗಿದೆ; ಇದಕ್ಕೆ ಕಾರಣಗಳೇನು;

ಈ) ಈ ಕಾರ್ಯದರ್ಶಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೇ?